# All India Radio: Bangalore
# National Bulletins In Kannada
# 23.05.2025 / 19.35 hrs

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

೧. ಆಸಿಯಾನ್ ರಾಷ್ಟ್ರಗಳೊಂದಿಗೆ ೨೦೦ ಶತಕೋಟಿ ಡಾಲರ್ ವ್ಯಾಪಾರಕ್ಕೆ ಈಶಾನ್ಯ ರಾಜ್ಯಗಳು ಪ್ರವೇಶ ದ್ವಾರಗಳಾಗಲಿವೆ - ಪ್ರಧಾನಿ ನರೇಂದ್ರ ಮೋದಿ

೨. ೨೦೨೪-೨೫ನೇ ಹಣಕಾಸು ವರ್ಷದಲ್ಲಿ ೨.೬೯ ಲಕ್ಷ ಕೋಟಿ ರೂಪಾಯಿ ಹೆಚ್ಚುವರಿಹಣ ಕೇಂದ್ರ ಸರ್ಕಾರಕ್ಕೆ ವರ್ಗಾಯಿಸಲು ಆರ್‌ಬಿಐ ಅನುಮೋದನೆ

೩. ರಾಜಕೀಯ ಇಚ್ಛಾಶಕ್ತಿ, ಗುಪ್ತಚರ ಸಂಸ್ಥೆಗಳ ನಿಖರವಾದ ಮಾಹಿತಿ, ಸಶಸ್ತ್ರ ಪಡೆಗಳ ಅದ್ಭುತ ಪ್ರದರ್ಶನವೇ ಆಪರೇಷನ್ 'ಸಿಂದೂರ' ಯಶಸ್ವಿಗೆ ಕಾರಣ - ಕೇಂದ್ರ ಸಚಿವ ಅಮಿತ್ ಶಾ

೪. ಐಪಿಎಲ್ ಟಿ-೨೦ ಕ್ರಿಕೆಟ್; ಸನ್ ರೈಸರ್ಸ್ ಹೈದರಾಬಾದ್ ವಿರುದ್ಧ ಟಾಸ್ ಗೆದ್ದ ರಾಯಲ್ ಚಾಲೆಂಜರ್ಸ್ ಬೆಂಗಳೂರು ಫೀಲ್ಡಿಂಗ್ ಆಯ್ಕೆ

<><*<><>*><>

ಆಸಿಯಾನ್ ದೇಶಗಳೊಂದಿಗಿನ ಭಾರತದ ವ್ಯಾಪಾರವು ಪ್ರಸ್ತುತ ಸುಮಾರು ೧೨೫ ಶತಕೋಟಿ ಡಾಲರ್ ಆಗಿದೆ ಎಂದು ಮುಂದಿನ ದಿನಗಳಲ್ಲಿ ೨೦೦ ಶತಕೋಟಿ ಡಾಲರ್ ವ್ಯಾಪಾರಕ್ಕೆ ಈಶಾನ್ಯ ರಾಜ್ಯಗಳು ಪ್ರವೇಶ ದ್ವಾರಗಳಾಗಲಿವೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ನವದೆಹಲಿಯಲ್ಲಿಂದು ಉದಯೋನ್ಮುಖ ಈಶಾನ್ಯ ಹೂಡಿಕೆದಾರರ ಶೃಂಗಸಭೆಯನ್ನು ಉದ್ಘಾಟಿಸಿ ಮಾತನಾಡಿದ ಪ್ರಧಾನಿ, ಮ್ಯಾನ್ಮಾರ್‌ನಿಂದ ಥೈಲ್ಯಾಂಡ್‌ಗೆ ನೇರ ಪ್ರವೇಶವನ್ನು ಒದಗಿಸುವ, ಥೈಲ್ಯಾಂಡ್, ವಿಯೆಟ್ನಾಂ ಮತ್ತು ಲಾವೋಸ್‌ನೊಂದಿಗೆ ಭಾರತದ ಸಂಪರ್ಕವನ್ನು ಬಲಪಡಿಸುವ ಭಾರತ-ಮ್ಯಾನ್ಮಾರ್-ಥೈಲ್ಯಾಂಡ್ ತ್ರಿಪಕ್ಷೀಯ ಹೆದ್ದಾರಿಯ ಮಹತ್ವವನ್ನು ಒತ್ತಿ ಹೇಳಿದರು. ಗುವಾಹಟಿ, ಇಂಫಾಲ್ ಮತ್ತು ಅಗರ್ತಲಾ ನಗರಗಳನ್ನು ಬಹು-ಮಾದರಿ ಲಾಜಿಸ್ಟಿಕ್ಸ್ ಹಬ್‌ಗಳಾಗಿ ಅಭಿವೃದ್ಧಿಪಡಿಸಲಾಗುತ್ತಿದೆ. ಮೇಘಾಲಯ ಮತ್ತು ಮಿಜೋರಾಂನಲ್ಲಿ ಭೂ ಕಸ್ಟಮ್ ಸ್ಟೇಷನ್‌ಗಳ ಸ್ಥಾಪನೆಯು ಅಂತರರಾಷ್ಟ್ರೀಯ ವ್ಯಾಪಾರ ಅವಕಾಶಗಳನ್ನು ಮತ್ತಷ್ಟು ವಿಸ್ತರಿಸುತ್ತಿದೆ ಎಂದು ಹೇಳಿದರು. ಈ ಪ್ರಗತಿಗಳು ಈಶಾನ್ಯವನ್ನು ಇಂಡೋ-ಪೆಸಿಫಿಕ್ ರಾಷ್ಟ್ರಗಳೊಂದಿಗೆ ವ್ಯಾಪಾರದಲ್ಲಿ ಹೆಚ್ಚುತ್ತಿರುವ ಶಕ್ತಿಯಾಗಿ ಇರಿಸುತ್ತಿವೆ, ಹೂಡಿಕೆ ಮತ್ತು ಆರ್ಥಿಕ ಬೆಳವಣಿಗೆಗೆ ಹೊಸ ಮಾರ್ಗಗಳನ್ನು ತೆರೆಯುತ್ತಿವೆ ಎಂದು ಅವರು ಒತ್ತಿ ಹೇಳಿದರು.

<><*<><>*><>

ಭಾರತೀಯ ರಿಸರ್ವ್ ಬ್ಯಾಂಕ್‌ನ ಕೇಂದ್ರೀಯ ನಿರ್ದೇಶಕರ ಮಂಡಳಿಯು ೨೦೨೪-೨೫ನೇ ಹಣಕಾಸು ವರ್ಷಕ್ಕೆ ಕೇಂದ್ರ ಸರ್ಕಾರಕ್ಕೆ ೨.೬೯ ಲಕ್ಷ ಕೋಟಿ ರೂಪಾಯಿ ಹೆಚ್ಚಿನ ಹೆಚ್ಚುವರಿ ಹಣವನ್ನು ವರ್ಗಾಯಿಸಲು ಅನುಮೋದನೆ ನೀಡಿದೆ.

ಮುಂಬೈನಲ್ಲಿ ಆರ್‌ಬಿಐ ಗವರ್ನರ್ ಸಂಜಯ್ ಮಲ್ಹೋತ್ರಾ ಅಧ್ಯಕ್ಷತೆಯಲ್ಲಿ ನಡೆದ ಮಂಡಳಿ ಸಭೆಯಲ್ಲಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಮಂಡಳಿಯು ದೇಶೀಯ ಮತ್ತು ಜಾಗತಿಕ ಆರ್ಥಿಕ ಪರಿಸ್ಥಿತಿಯನ್ನು ಪರಿಶೀಲಿಸಿ, ಆರ್‌ಬಿಐ ನ ವಾರ್ಷಿಕ ವರದಿ ಮತ್ತು ವರ್ಷದ ಹಣಕಾಸು ವರದಿಯನ್ನು ಅನುಮೋದಿಸಿತು.

<><*<><>*><>

ಪಹಲ್ಗಾಮ್ ದಾಳಿಗೆ ಪ್ರತಿಯಾಗಿ ಭಾರತ ಆಪರೇಷನ್ 'ಸಿಂದೂರ' ಮೂಲಕ ತಕ್ಕ ಉತ್ತರ ನೀಡಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ನವದೆಹಲಿಯಲ್ಲಿಂದು ನಡೆದ ಗಡಿ ಭದ್ರತಾ ಪಡೆಯ ಪ್ರತಿಷ್ಠಾಪನಾ ಸಮಾರಂಭವನ್ನುದ್ದೇಶಿಸಿ ಮಾತನಾಡಿದ ಸಚಿವರು, ಇಂದು ಜಗತ್ತು ಭಾರತೀಯ ಸಶಸ್ತ್ರ ಪಡೆಗಳ ಶೌರ್ಯವನ್ನು ಶ್ಲಾಘಿಸುತ್ತಿದೆ. ಸರ್ಕಾರದ ಬಲವಾದ ರಾಜಕೀಯ ಇಚ್ಛಾಶಕ್ತಿ, ಗುಪ್ತಚರ ಸಂಸ್ಥೆಗಳ ನಿಖರವಾದ ಮಾಹಿತಿ ಮತ್ತು ಸಶಸ್ತ್ರ ಪಡೆಗಳ ಅದ್ಭುತ ಪ್ರದರ್ಶನವೇ ಆಪರೇಷನ್ 'ಸಿಂದೂರ'

ದ ಯಶಸ್ವಿ ಸಾಧನೆಗೆ ಕಾರಣ ಎಂದು ತಿಳಿಸಿದ್ದಾರೆ. ಪಾಕಿಸ್ತಾನದ ವಿರುದ್ಧ ಭಾರತದ ಪ್ರತೀಕಾರದ ಕ್ರಮದಲ್ಲಿ ಬಿಎಸ್‌ಎಫ್ ಮತ್ತು ಸಶಸ್ತ್ರ ಪಡೆಗಳು ಮಹಾನ್ ಶೌರ್ಯ ಮತ್ತು ರಕ್ಷಣೆಯ ನಿಜವಾದ ಶಕ್ತಿಯನ್ನು ಪ್ರದರ್ಶಿಸಿವೆ ಎಂದು ಹೇಳಿದರು.

<><*<><>*><>

ಪ್ರಧಾನಿ ನರೇಂದ್ರ ಮೋದಿ ಇದೇ ೨೯ ರಂದು ಬಿಹಾರಕ್ಕೆ ಭೇಟಿ ನೀಡಲಿದ್ದು, ಪಾಟ್ನಾ ವಿಮಾನ ನಿಲ್ದಾಣದ ಹೊಸ ಟರ್ಮಿನಲ್ ಉದ್ಘಾಟಿಸಲಿದ್ದಾರೆ. ಪಾಟ್ನಾದಲ್ಲಿಂದು ಮಾಧ್ಯಮಗಳೊಂದಿಗೆ ಮಾತನಾಡಿದ ಬಿಹಾರ ಬಿಜೆಪಿ ಮುಖ್ಯಸ್ಥ ದಿಲೀಪ್ ಜೈಸ್ವಾಲ್ ಈ ವಿಷಯ ತಿಳಿಸಿದ್ದಾರೆ. ಕೇಂದ್ರ ಸರ್ಕಾರದ ಪ್ರಮುಖ ಮೂಲಸೌಕರ್ಯ ಉಪಕ್ರಮವಾದ ಬಿಹ್ತಾ ವಿಮಾನ ನಿಲ್ದಾಣ ವಿಸ್ತರಣಾ ಯೋಜನೆಯ ಪ್ರಗತಿಯನ್ನು ಸಹ ಪ್ರಧಾನಿ ಪರಿಶೀಲಿಸಲಿದ್ದಾರೆ ಎಂದು ಅವರು ಮಾಹಿತಿ ನೀಡಿದರು. ತಮ್ಮ ಭೇಟಿಯ ಸಮಯದಲ್ಲಿ ಪ್ರಧಾನಿ, ಪಾಟ್ನಾದಲ್ಲಿರುವ ಬಿಜೆಪಿ ರಾಜ್ಯ ಪ್ರಧಾನ ಕಚೇರಿಗೆ ಭೇಟಿ ನೀಡಿ ಪಕ್ಷದ ಕಾರ್ಯಕರ್ತರೊಂದಿಗೆ ಸಂವಾದ ನಡೆಸಲಿದ್ದಾರೆ. ಮೇ ೩೦ ರಂದು ಪ್ರಧಾನಿ ರೋಹ್ತಾಸ್ ಜಿಲ್ಲೆಯ ಬಿಕ್ರಮ್‌ಗಂಜ್‌ಗೆ ತೆರಳಲಿದ್ದು, ಅಲ್ಲಿ ಅವರು ಬೃಹತ್ ರ‍್ಯಾಲಿಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ ಎಂದು ತಿಳಿಸಿದ್ದಾರೆ.

<><*<><>*><>

ಆಕಾಶವಾಣಿಯ ಜನಪ್ರಿಯ ಕಾರ್ಯಕ್ರಮ ಮನ್ ಕಿ ಬಾತ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ, ಇದೇ ತಿಂಗಳ ೨೫ರಂದು ಬೆಳಗ್ಗೆ ೧೧ ಗಂಟೆಗೆ ದೇಶ-ವಿದೇಶದಲ್ಲಿರುವ ಭಾರತೀಯರೊಂದಿಗೆ ತಮ್ಮ ಆಲೋಚನೆಗಳನ್ನು ಹಂಚಿಕೊಳ್ಳಲಿದ್ದಾರೆ. ಇದು  ಮನ್ ಕಿ ಬಾತ್ ನ ೧೨೨ನೇ ಸಂಚಿಕೆ. ಟೋಲ್-ಫ್ರೀ ಸಂಖ್ಯೆ ೧೮೦೦-೧೧-೭೮೦೦ ಮೂಲಕ ಮನದ ಮಾತಿನ ಸಂಚಿಕೆಗೆ ಜನರು ತಮ್ಮ ಆಲೋಚನೆ, ಸಲಹೆಗಳನ್ನು ಸಲ್ಲಿಸಬಹುದು. ನರೇಂದ್ರ ಮೋದಿ ಅಪ್ಲಿಕೇಶನ್ ಅಥವಾ ಮೈ ಜಿಒವಿ ಓಪನ್ ಫೋರಂ ಮೂಲಕ ಆನ್‌ಲೈನ್‌ನಲ್ಲಿ ಜನರು ತಮ್ಮ ಅನಿಸಿಕೆಗಳನ್ನು ಹಂಚಿಕೊಳ್ಳಬಹುದು. ಸಲಹೆಗಳನ್ನು ಸ್ವೀಕರಿಸಲು ಇಂದು ಕೊನೆಯ ದಿನವಾಗಿದೆ.

<><*<><>*><>

ಕೇಂದ್ರ ವಿದ್ಯುತ ಸಚಿವ ಮನೋಹರ್ ಲಾಲ್ ನೇತೃತ್ವದಲ್ಲಿಂದು ಕರ್ನಾಟಕದ ವಿದ್ಯುತ್ ವಲಯದ ಪ್ರಗತಿ ಪರಿಶೀಲನೆ ಬೆಂಗಳೂರಿನಲ್ಲಿ ನಡೆಯಿತು. ಕೇಂದ್ರ ವಿದ್ಯುತ್ ಮತ್ತು ಪುನರ್ ನವೀಕರಣಗೊಳ್ಳುವ ಇಂಧನ ಖಾತೆ ರಾಜ್ಯ ಸಚಿವ ಶ್ರೀಪಾದ್ ನಾಯ್ಕ್, ರಾಜ್ಯ ಇಂಧನ ಸಚಿವ ಕೆ.ಜೆ. ಜಾರ್ಜ್, ಕೇಂದ್ರ ಇಂಧನ ಸಚಿವಾಲಯ ಮತ್ತು ರಾಜ್ಯ ವಿದ್ಯುತ್ ಇಲಾಖೆಯ ಹಿರಿಯ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು. ಬಳಿಕ ಸಚಿವ ಮನೋಹರ್ ಲಾಲ್, ರಾಜ್ಯ ಇಂಧನ ಇಲಾಖೆಯಲ್ಲಿ ವಾರ್ಷಿಕ ಹಣಕಾಸು ನಷ್ಟ ಪ್ರಮಾಣ ಹೆಚ್ಚುತ್ತಿದ್ದು, ಇದನ್ನು ಕಡಿಮೆ ಮಾಡಲು ಸೂಕ್ತ ಕ್ರಮ ಕೈಗೊಳ್ಳಬೇಕು ಹಾಗೂ ವೆಚ್ಚ ಪರಿಣಾಮಕಾರಿಯಾಗುವ ಶುಲ್ಕ ಕ್ರಮ ಜಾರಿಗೊಳಿಸಬೇಕು ಎಂದು ಸೂಚಿಸಿದರು.

<><*<><>*><>

ಪಾಕಿಸ್ತಾನದೊಂದಿಗಿನ ಸಂಘರ್ಷವನ್ನು ಭಾರತವು, ಮಿಲಿಟರಿ ಕಾರ್ಯಾಚರಣೆಯನ್ನು ನಿಲ್ಲಿಸುವ ಒಪ್ಪಂದದ ಮೂಲಕ ತಾತ್ಕಾಲಿಕವಾಗಿ ಪರಿಹರಿಸಿದೆ ಎಂದು ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಹೇಳಿದ್ದಾರೆ. ಡೆನ್ಮಾರ್ಕ್‌ನಲ್ಲಿ ಸುದ್ದಿ ವಾಹಿನಿಯೊಂದಕ್ಕೆ ನೀಡಿದ ಸಂದರ್ಶನದಲ್ಲಿ ಸಚಿವರು, ಉಭಯ ದೇಶಗಳು, ನೇರವಾಗಿ ಮಾತುಕತೆ ಮೂಲಕ ಸಂಘರ್ಷ ಪರಿಹರಿಸಿಕೊಂಡಿವೆ ಎಂದು ತಿಳಿಸಿದರು. ಏಪ್ರಿಲ್‌ನಲ್ಲಿ ಭಾರತ ಗಂಭೀರ ಭಯೋತ್ಪಾದಕ ದಾಳಿಯನ್ನು ಎದುರಿಸಬೇಕಾಯಿತು ಮತ್ತು ಭಾರತ ಅದಕ್ಕೆ ತಕ್ಕ ಉತ್ತರ ನೀಡಿದೆ. ಭಯೋತ್ಪಾದಕರು ನೆರೆಯ ರಾಷ್ಟ್ರದಲ್ಲಿ ನೆಲೆಸಿದ್ದು, ಆ ದೇಶದ ಬೆಂಬಲದೊಂದಿಗೆ ಕಾರ್ಯನಿರ್ವಹಿಸುತ್ತಿದ್ದಾರೆ ಎಂದು ಹೇಳಿದರು. ಭಾರತವು, ಐತಿಹಾಸಿಕವಾಗಿ ತನ್ನನ್ನು ತಾನು ರಕ್ಷಿಸಿಕೊಂಡಿದ್ದು, ಅದು ಆದ್ಯತೆಯ ಕಾರ್ಯತಂತ್ರದ ಭಾಗವಾಗಿದೆ. ಇದು ಜಾಗತಿಕ ಅನಿಶ್ಚಿತತೆ ಮತ್ತು ಚಂಚಲತೆಯ ಯುಗವಾಗಿದ್ದು, ಭಾರತವು ಅದನ್ನು ಹೆಚ್ಚಿನ ಮಟ್ಟದ ಸಮಚಿತ್ತದಿಂದ ಎದುರಿಸುತ್ತಿದೆ ಎಂದು ತಿಳಿಸಿದರು. ಉಕ್ರೇನ್-ರಷ್ಯಾ ಸಂಘರ್ಷದ ಕುರಿತು ಪ್ರತಿಕ್ರಿಯಿಸಿರುವ ಸಚಿವರು, ಈ ಪರಿಸ್ಥಿತಿ ಭಾರತ ಮತ್ತು ಇಡೀ ಜಗತ್ತಿಗೆ ಕಳವಳಕಾರಿಯಾಗಿದೆ. ಈ ಸಂಘರ್ಷವು ಜಾಗತಿಕ ಇಂಧನ ಪರಿಸ್ಥಿತಿ ಮತ್ತು ದೇಶಗಳ ಆಹಾರ ಭದ್ರತೆಯನ್ನು ಅಸ್ತವ್ಯಸ್ತಗೊಳಿಸಿದೆ ಎಂದು ಅವರು ಹೇಳಿದರು.

<><*<><>*><>

ಭಾರತದಿಂದ ಜಪಾನ್‌ಗೆ ತೆರಳಿದ್ದ ಸಂಸದ ಸಂಜಯ್ ಝಾ ನೇತೃತ್ವದ ಸರ್ವಪಕ್ಷ ನಿಯೋಗ, ಇಂದು ಜಪಾನ್‌ನ ಟೋಕಿಯೊದಲ್ಲಿ ಲಿಬರಲ್ ಡೆಮಾಕ್ರಟಿಕ್ ಪಕ್ಷದ ಭಯೋತ್ಪಾದನಾ ನಿಗ್ರಹ ಸಂಶೋಧನಾ ಸಮಿತಿಯ ಕಾರ್ಯಕಾರಿ ಅಧ್ಯಕ್ಷ ಹಾಗೂ ಸಚಿವ ಯಸುಹಿರೊ ಹನಾಶಿ ಅವರನ್ನು ಭೇಟಿ ಮಾಡಿತು. ಈ ಭೇಟಿಯ ವೇಳೆ ಎಲ್ಲಾ ರೀತಿಯ ಭಯೋತ್ಪಾದನೆಯ ವಿರುದ್ಧ ಭಾರತದ ಏಕೀಕೃತ ಮತ್ತು ದೃಢನಿಶ್ಚಯದ ನಿಲುವನ್ನು ನಿಯೋಗವು ಒತ್ತಿ ಹೇಳಿದೆ. ಭಯೋತ್ಪಾದನೆಗೆ ಎರಡೂ ಕಡೆಯವರು ತಮ್ಮ

ಶೂನ್ಯ ಸಹಿಷ್ಣುತಾ ವಿಧಾನವನ್ನು ಪುನರುಚ್ಚರಿಸಿದರು. ಪ್ರಸ್ತುತ ಮಾಸ್ಕೋದಲ್ಲಿರುವ ಸಂಸದೆ ಕನಿಮೋಳಿ ಕರುಣಾನಿಧಿ ನೇತೃತ್ವದ ಮತ್ತೊಂದು ಬಹುಪಕ್ಷ ನಿಯೋಗಕ್ಕೆ, ರಷ್ಯಾದಲ್ಲಿನ ಭಾರತೀಯ ರಾಯಭಾರಿ ವಿನಯ್ ಕುಮಾರ್, ಅಧಿಕೃತ ಕಾರ್ಯಕ್ರಮಗಳನ್ನು ಪ್ರಾರಂಭಿಸುವ ಮೊದಲು ಭಾರತ-ರಷ್ಯಾ ಸಂಬಂಧಗಳ ವಿವಿಧ ಅಂಶಗಳ ಕುರಿತು ವಿವರಿಸಿದರು.

**<><*<><>*><>**

ಬಿಜೆಪಿ ಸಂಸದ ಬೈಜಯಂತ್ ಪಾಂಡಾ, ಕಾಂಗ್ರೆಸ್ ಸಂಸದ ಶಶಿ ತರೂರ್ ಮತ್ತು ಸುಪ್ರಿಯಾ ಸುಲೆ ನೇತೃತ್ವದ ನಿಯೋಗಗಳು ನಾಳೆ ತಮ್ಮ ಭೇಟಿಗಳಿಗೆ ಹೊರಡಲಿದ್ದು, ಬಿಜೆಪಿ ಸಂಸದ ರವಿಶಂಕರ್ ಪ್ರಸಾದ್ ನೇತೃತ್ವದ ನಿಯೋಗವು ನಾಡಿದ್ದು ಹೊರಡಲಿದೆ. ಬೈಜಯಂತ್ ಪಾಂಡಾ ನೇತೃತ್ವದ ನಿಯೋಗ ಸೌದಿ ಅರೇಬಿಯಾ, ಕುವೈತ್, ಬಹ್ರೇನ್ ಮತ್ತು ಅಲ್ಜೀರಿಯಾಕ್ಕೆ ಹೋಗಲಿದ್ದು, ಶಶಿ ತರೂರ್ ನೇತೃತ್ವದ ನಿಯೋಗವು ಅಮೆರಿಕ, ಪನಾಮ, ಗಯಾನಾ, ಬ್ರೆಜಿಲ್ ಮತ್ತು ಕೊಲಂಬಿಯಾದಲ್ಲಿ ಭಯೋತ್ಪಾದನೆಯ ವಿರುದ್ಧ ಭಾರತದ ಸಾಮೂಹಿಕ ಸಂಕಲ್ಪವನ್ನು ಪ್ರತಿನಿಧಿಸಲಿದೆ. ಸುಪ್ರಿಯಾ ಸುಲೆ ನೇತೃತ್ವದ ನಿಯೋಗವು ಈಜಿಪ್ಟ್, ಕತಾರ್, ಇಥಿಯೋಪಿಯಾ ಮತ್ತು ದಕ್ಷಿಣ ಆಫ್ರಿಕಾಕ್ಕೆ ಭೇಟಿ ನೀಡಲಿದ್ದು, ರವಿಶಂಕರ್ ಪ್ರಸಾದ್ ನೇತೃತ್ವದ ನಿಯೋಗವು ಯುಕೆ, ಫ್ರಾನ್ಸ್, ಜರ್ಮನಿ, ಇಟಲಿ ಮತ್ತು ಡೆನ್ಮಾರ್ಕ್‌ಗೆ ಭೇಟಿ ನೀಡಲಿದೆ. ಸರ್ವಪಕ್ಷ ನಿಯೋಗಗಳು ಶೀಘ್ರದಲ್ಲೇ ಆಪರೇಷನ್ 'ಸಿಂದೂರ' ಅಡಿಯಲ್ಲಿ ಪ್ರಮುಖ ರಾಷ್ಟ್ರಗಳನ್ನು ತೊಡಗಿಸಿಕೊಳ್ಳಲಿವೆ, ಇದು ಭಯೋತ್ಪಾದನೆಯ ವಿರುದ್ಧ ಭಾರತದ ಸಾಮೂಹಿಕ ಸಂಕಲ್ಪವನ್ನು ಪ್ರತಿಬಿಂಬಿಸುತ್ತದೆ. ಈ ನಿಯೋಗಗಳು ರಾಜಕೀಯಕ್ಕಿಂತ ಹೆಚ್ಚಾಗಿ ರಾಷ್ಟ್ರೀಯ ಏಕತೆಯ ಪ್ರಬಲ ಪ್ರತಿಬಿಂಬವಾಗಿದೆ, ಇದು ಭಯೋತ್ಪಾದನೆಗೆ ಶೂನ್ಯ ಸಹಿಷ್ಣುತೆಯ ಹಂಚಿಕೆಯ ಸಂದೇಶವನ್ನು ಹೊಂದಿದೆ.

**<><*<><>*><>**

ಲಕ್ನೋದ ಭಾರತರತ್ನ ಶ್ರೀ ಅಟಲ್‌ಬಿಹಾರಿ ವಾಜಪೇಯಿ ಏಕನಾ ಕ್ರಿಕೆಟ್ ಕ್ರೀಡಾಂಗಣದಲ್ಲಿಂದು ನಡೆಯುತ್ತಿರುವ ಇಂಡಿಯನ್ ಪ್ರೀಮಿಯರ್ ಲೀಗ್ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಸನ್‌ರೈಸರ್ಸ್ ಹೈದರಾಬಾದ್ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ. ಈ ಪಂದ್ಯದಲ್ಲಿ ರಾಯಲ್‌ಚಾಲೆಂಜರ್ಸ್ ಬೆಂಗಳೂರು ಗೆಲುವು ಸಾಧಿಸಿದರೆ, ಅಂಕಪಟ್ಟಿಯಲ್ಲಿ ಅಗ್ರ ಸ್ಥಾನಕ್ಕೆ ಏರಲಿದೆ.

**<><*<><>*><>**

ದಕ್ಷಿಣ ಕೊಂಕಣ, ಕರಾವಳಿ ಮತ್ತು  ಕರ್ನಾಟಕದ ಘಟ್ಟ ಪ್ರದೇಶ, ಮಧ್ಯ ಮಹಾರಾಷ್ಟ್ರ ಮತ್ತು ಗೋವಾದಲ್ಲಿ ಭಾರೀ ಮಳೆಯಾಗುವ ಸಾಧ್ಯತೆ ಇದ್ದು, ಈ ಪ್ರದೇಶಗಳಲ್ಲಿ ರೆಡ್ ಮತ್ತು ಆರೆಂಜ್ ಅಲರ್ಟ್ ನೀಡಲಾಗಿದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ. ಆಕಾಶವಾಣಿಯೊಂದಿಗೆ ಮಾತನಾಡಿದ ಹಿರಿಯ ಐಎಂಡಿ ವಿಜ್ಞಾನಿ ಡಾ. ಆರ್.ಕೆ. ಜೆನಮಣಿ, ದಕ್ಷಿಣ ಕೊಂಕಣ-ಗೋವಾ ಕರಾವಳಿಯ ಪೂರ್ವ-ಮಧ್ಯ ಅರಬ್ಬಿ ಸಮುದ್ರದಲ್ಲಿ ಉಂಟಾದ ವಾಯುಭಾರ ಕುಸಿತ ಗೋವಾ ಕರಾವಳಿಯ ಬಳಿ ಮುಂದುವರೆದಿದ್ದು, ಅದು ತೀವ್ರಗೊಳ್ಳಬಹುದು ಎಂದು ಹೇಳಿದರು.  ಮುಂದಿನ ಎರಡು ಮೂರು ದಿನಗಳಲ್ಲಿ ಕೇರಳದಲ್ಲಿ ಮುಂಗಾರು ಆರಂಭಕ್ಕೆ ಎಲ್ಲಾ ಪರಿಸ್ಥಿತಿಗಳು ಅನುಕೂಲಕರವಾಗಿವೆ ಎಂದು ಅವರು ಹೇಳಿದರು. ಏತನ್ಮಧ್ಯೆ, ಮುಂದಿನ ಎರಡು ಮೂರು ದಿನಗಳವರೆಗೆ ಪಶ್ಚಿಮ ರಾಜಸ್ಥಾನದಲ್ಲಿ ಉಷ್ಣ ಅಲೆ ಇರುವ ಸಾಧ್ಯತೆಯಿದೆ. ದೆಹಲಿ ಪ್ರದೇಶದಲ್ಲಿ ಗುಡುಗು ಸಹಿತ ಮಳೆ, ಬಿರುಗಾಳಿ ಮತ್ತು ಮಿಂಚು ಸಹಿತ ಹಗುರವಾದ ಮಳೆಯಾಗುವ ಸಾಧ್ಯತೆಯಿದೆ.

**<><*<><>*><>**

ಮಲೇಷ್ಯಾ ಮಾಸ್ಟರ್ಸ್‌ನ ಪುರುಷರ ಸಿಂಗಲ್ಸ್ ಬ್ಯಾಡ್ಮಿಂಟನ್‌ನಲ್ಲಿ, ಭಾರತದ ಖ್ಯಾತ ಶಟ್ಲರ್ ಕಿದಂಬಿ ಶ್ರೀಕಾಂತ್ ಇಂದು ಮಧ್ಯಾಹ್ನ ಫ್ರಾನ್ಸ್‌ನ ಟೋಮಾ ಜೂನಿಯರ್ ಪೊಪೊವ್ ವಿರುದ್ಧ ಜಯಗಳಿಸುವ ಮೂಲಕ ಸೆಮಿಫೈನಲ್‌ಗೆ ಲಗ್ಗೆ ಇಟ್ಟಿದ್ದಾರೆ. ಶ್ರೀಕಾಂತ್ ಟೂರ್ನಿಯಲ್ಲಿ ಉಳಿದಿರುವ ಏಕೈಕ ಭಾರತೀಯ ಆಟಗಾರರಾಗಿದ್ದಾರೆ. ಭಾರತದ ಮಿಶ್ರ ಡಬಲ್ಸ್ ಜೋಡಿ ತನಿಶಾ ಕ್ರಾಸ್ಟೊ ಮತ್ತು ಧ್ರುವ್ ಕಪಿಲಾ ಚೀನಾದ ವೀ ಯಾಕ್ಸಿನ್ ಮತ್ತು ಜಿಯಾಂಗ್ ಝೆನ್‌ಬಾಂಗ್ ವಿರುದ್ಧ ೨೪-೨೨, ೨೧-೧೩ ಅಂತರದಿಂದ ನೇರ ಆಟಗಳಲ್ಲಿ ಸೋತು ಸ್ಪರ್ಧೆಯಿಂದ ನಿರ್ಗಮಿಸಿದರು.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ**